ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಪೊಲೀಸ್ ಇಲಾಖೆಯ ಆಡಳಿತ ನಿಯಂತ್ರಣದಲ್ಲಿ ಕಲ್ಯಾಣ ಮಂಟಪ ನಿರ್ಮಾಣದ ಬಗ್ಗೆ

ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-

765 (671) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪೊಲೀಸ್ ಇಲಾಖೆಯ ಆಡಳಿತ ನಿಯಂತ್ರಣದಲ್ಲಿ ಕಲ್ಯಾಣ ಮಂಟಪಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ಮತ್ತು ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಬಾಡಿಗೆ ಆಧಾರದ ಮೇಲೆ ಬಾಡಿಗೆಗೆ ನೀಡಿ ಹಣ ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಮಹಾನಗರಗಳಲ್ಲಿ (ಬೆಂಗಳೂರು ಸೇರಿದಂತೆ) ಇರುವ ಕಲ್ಯಾಣ ಮಂಟಪಗಳು ಎಷ್ಟು ; ಪ್ರತಿ ಕಲ್ಯಾಣ ಮಂಟಪಗಳಲ್ಲಿ ಪ್ರತಿ ಕಾರ್ಯಕ್ರಮಗಳಿಗೆ ವಿಧಿಸುತ್ತಿರುವ ಬಾಡಿಗೆ ಹಣವೆಷ್ಟು ;

(ಇ) ಮೇಲ್ಕಂಡ ಕಲ್ಯಾಣ ಮಂಟಪಗಳನ್ನು ನಿರ್ಮಿಸಲು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; ಮತ್ತು ಸಂಬಂಧಪಟ್ಟ ಮಹಾನಗರ ಪಾಲಿಕೆ, ಪುರಸಭೆ ಬೆಂಗಳೂರು ಮಹಾನಗರ ಪಾಲಿಕೆಯಿಂದ ಅನುಮತಿ ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ ಸದರಿ ಆದೇಶ ಪ್ರತಿಗಳನ್ನು ಒದಗಿಸುವುದು ;

(ಈ) ಸರ್ಕಾರದಿಂದ ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ಕಲ್ಯಾಣ ಮಂಟಪಗಳನ್ನು ನಿರ್ಮಿಸಲು ಅನುಮತಿ ಪಡೆಯದಿದ್ದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಕಲ್ಯಾಣ ಮಂಟಪಗಳಿಂದ ಬಾಡಿಗೆ ರೂಪದಲ್ಲಿ ಸಂಗ್ರಹಿಸಿದ ಬಾಡಿಗೆ ಹಣವನ್ನು ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಜಮಾ ಮಾಡಲಾಗಿದೆ ; (ವಿವರಗಳನ್ನು ಒದಗಿಸುವುದು)

(ಊ) ಪ್ರತಿ ಕಲ್ಯಾಣ ಮಂಟಪಕ್ಕೆ ಸರ್ಕಾರದಿಂದ ಸಹಾಯ ಧನ ಮಂಜೂರು ಮಾಡಲಾಗಿದೆಯೇ ; ಮಂಜೂರು ಮಾಡಿದ ಹಣವನ್ನು ಸಾಲದ ರೂಪದಲ್ಲಿ ಬಡ್ಡಿ ಸಹಿತ ಅಥವಾ ಬಡ್ಡಿರಹಿತವಾಗಿ ಹಿಂದಿರುಗಿಸುವ ಷರತ್ತಿನೊಂದಿಗೆ ನೀಡಲಾಗಿದೆಯೇ ? (ಪೂರ್ಣ ಮಾಹಿತಿಯನ್ನು ಒದಗಿಸುವುದು)